ದೂರವಾಣಿ ಸಂಖ್ಯೆ : 080-22212343
ಫ್ಯಾಕ್ಸ್ ಸಂಖ್ಯೆ : 080-22278803
Website : https://kptcl.karnataka.gov.in
ಇ-ಮೇಲ್ ವಿಳಾಸ: director.ahr.kptcl@gmail.com

# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

ನಿಗಮದ ಗುರುತಿನ ಸಂಖ್ಯೆ (ಸಿ.ಐ.ಎನ್.) : ಯು40109ಕೆಎ1999ಎಸ್‌ಜಿಸಿ025521
ಕಂಪನಿಯ ಅಧಿಕೃತ ಕಛೇರಿ : ನಿಗಮ ಕಾರ್ಯಾಲಯ, ಕಾವೇರಿ ಭವನ, ಕೆ.ಜಿ. ರಸ್ತೆ, ಬೆಂಗಳೂರು-560 009

**ಪ್ರಸ್ತಾವನೆ:** ದಿನಾಂಕ : 19 NOV 2022

1. ಸರ್ಕಾರದ ಆದೇಶ ಸಂಖ್ಯೆ: ಆಇ 42 ಎಸ್‌ಆರ್‌ಪಿ 2022, ಬೆಂಗಳೂರು ದಿನಾಂಕ: 16.11.2022 ರಲ್ಲಿ 'ಪುಣ್ಯಕೋಟಿ ದತ್ತು ಯೋಜನೆ' ಸುಗಮ ಅನುಷ್ಠಾನಕ್ಕಾಗಿ ವಿವಿಧ ಪದವೃಂದದ ಕರ್ನಾಟಕ ರಾಜ್ಯ ಸರ್ಕಾರಿ ನೌಕರರು ಹಾಗೂ ನಿಗಮ/ಮಂಡಳಿ/ಪ್ರಾಧಿಕಾರ/ವಿಶ್ವವಿದ್ಯಾಲಯ/ಸ್ವಾಯತ್ತ ಸಂಸ್ಥೆಗಳ ನೌಕರರ ನವೆಂಬರ್-2022 ಮಾಹೆಯ ವೇತನದಲ್ಲಿ ಒಂದು ಬಾರಿಗೆ ಸೀಮಿತವಾಗಿ ನಿರ್ದಿಷ್ಟಪಡಿಸಿದ ಮೊತ್ತದ ವಂತಿಗೆಯನ್ನು ಕಡಿತಗೊಳಿಸಲು ಸರ್ಕಾರವು ಮಂಜೂರಾತಿ ನೀಡಿದೆ.
2. ಮೇಲಿನ ಆದೇಶವು ನಿಗಮ/ಮಂಡಳಿಗಳಿಗೂ ಅನ್ವಯಿಸುವುದರಿಂದ ಕವಿಪ್ರನಿನಿ ಮತ್ತು ಎಲ್ಲಾ ಎಸ್ಕಾಂಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅಧಿಕಾರಿ ಮತ್ತು ನೌಕರರ ನವೆಂಬರ್-2022 ಮಾಹೆಯ ವೇತನದಲ್ಲಿ ವಂತಿಗೆಯನ್ನು ಕಡಿತಗೊಳಿಸಬೇಕಾಗಿರುತ್ತದೆ. ಆದುದರಿಂದ ಈ ಆದೇಶ.

**ಆದೇಶ ಸಂಖ್ಯೆ: ಕವಿಪ್ರನಿನಿ/ಬಿ110/37122/2022-23, ಬೆಂಗಳೂರು** ದಿನಾಂಕ: 19 NOV 2022

ಪ್ರಸ್ತಾವನೆಯಲ್ಲಿ ವಿವರಿಸಿರುವ ಸಂದರ್ಭದ ಹಿನ್ನೆಲೆಯಲ್ಲಿ **"ಪುಣ್ಯಕೋಟಿ ದತ್ತು ಯೋಜನೆ"** ಸುಗಮ ಅನುಷ್ಠಾನಕ್ಕಾಗಿ ಕವಿಪ್ರನಿನಿ ಮತ್ತು ಎಸ್ಕಾಂಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅಧಿಕಾರಿ ಮತ್ತು ನೌಕರರ ನವೆಂಬರ್-2022 ಮಾಹೆಯ ವೇತನದಲ್ಲಿ ಒಂದು ಬಾರಿಗೆ ಸೀಮಿತವಾಗಿ ಈ ಕೆಳಕಂಡಂತೆ ನಿಗದಿಪಡಿಸಿರುವ ಮೊತ್ತದ ವಂತಿಗೆಯನ್ನು ಕಡಿತಗೊಳಿಸಲು ನಿಗಮವು ಅನುಮೋದಿಸಿದೆ:-

| ಕ್ರಮ ಸಂಖ್ಯೆ | ವೃಂದ | ಒಂದು ಬಾರಿಗೆ ಪಾವತಿಸುವ ಮೊತ್ತ |
|---|---|---|
| 1 | 'ಎ' ವೃಂದ ಅಧಿಕಾರಿಗಳು | ರೂ.11,000/- |
| 2 | 'ಬಿ' ವೃಂದ ಅಧಿಕಾರಿಗಳು | ರೂ.4,000/- |
| 3 | 'ಸಿ' ವೃಂದ ನೌಕರರು | ರೂ.400/- |
| 4 | 'ಡಿ' ವೃಂದ ನೌಕರರು | ವಿನಾಯಿತಿ. |

ಆದಾಗ್ಯೂ, ವೇತನದಿಂದ ನಿಗದಿತ ವಂತಿಗೆಯನ್ನು ಕೊಡಲಿಚ್ಛಿಸದ ನೌಕರರು ತಮ್ಮ ಅಸಮ್ಮತಿಯನ್ನು ಸಂಬಂಧಪಟ್ಟ ಬಟವಾಡೆ ಅಧಿಕಾರಿಗಳಿಗೆ ಲಿಖಿತ ಮೂಲಕ ದಿನಾಂಕ: 23.11.2022 ರೊಳಗಾಗಿ ಸಲ್ಲಿಸತಕ್ಕದ್ದು ಮತ್ತು ಅಂತಹ ನೌಕರರ ವೇತನದಿಂದ ನಿಗದಿತ ವಂತಿಗೆಯನ್ನು ಕಟಾವು ಮಾಡತಕ್ಕದ್ದಲ್ಲ.

ಈ ಆದೇಶದಂತೆ ಕಡಿತಗೊಳಿಸಲಾದ ವಂತಿಗೆಯನ್ನು ಸರ್ಕಾರಕ್ಕೆ ದಿನಾಂಕ: 15.12.2022 ರ ನಂತರ ಜಮೆ ಮಾಡಲು ಸರ್ಕಾರದ ಆದೇಶ ಸಂಖ್ಯೆ: ಆಇ 42 ಎಸ್‌ಆರ್‌ಪಿ 2022, ಬೆಂಗಳೂರು ದಿನಾಂಕ: 16.11.2022 ರಲ್ಲಿ ವಿವರಿಸಿದಂತೆ ಕ್ರಮ ತೆಗೆದುಕೊಳ್ಳಲು, ಸದರಿ ಸರ್ಕಾರದ ಆದೇಶದ ಪ್ರತಿಯನ್ನು ಈ ಆದೇಶದೊಂದಿಗೆ ಲಗತ್ತಿಸಲಾಗಿದೆ.

ನಿರ್ದೇಶಕರು(ಆ ಮತ್ತು ಮಾ.ಸಂ)

**ಮೆಮೋ**

**ಕ್ರಮಾಂಕ:ಚಾವಿಸನಿನಿ/ಆ ಮತ್ತು ಮಾ.ಸಂ./05/04/2022-23/** ಆ-1262 **ದಿನಾಂಕ:** 23 NOV 2022

ಚಾವಿಸನಿನಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅಧಿಕಾರಿ ಮತ್ತು ನೌಕರರ ನವೆಂಬರ್-2022ರ ಮಾಹೆಯ ವೇತನದಲ್ಲಿ ಒಂದು ಬಾರಿಗೆ ಸೀಮಿತವಾಗಿ ನಿಗದಿಪಡಿಸಿರುವ ಮೊತ್ತದ ವಂತಿಗೆಯನ್ನು ಕಡಿತಗೊಳಿಸಲು ನಿರ್ದೇಶಕರು(ಆ ಮತ್ತು ಮಾಸಂ), ಕವಿಪ್ರನಿನಿ, ಬೆಂಗಳೂರುರವರು ಹೊರಡಿಸಿರುವ ಆದೇಶ ಸಂಖ್ಯೆ:ಕವಿಪ್ರನಿನಿ/ಬಿ110/37122/2022-23 ದಿನಾಂಕ:19.11.2022ರ ಆದೇಶವನ್ನು ಚಾವಿಸನಿನಿಯಲ್ಲಿ ಯಥಾವತ್ತಾಗಿ ಅಳವಡಿಸಿಕೊಳ್ಳಲು ಆದೇಶಿಸಲಾಗಿದೆ.

ಪ್ರಧಾನ ವ್ಯವಸ್ಥಾಪಕರು(ಆ ಮತ್ತು ಮಾ.ಸಂ)
ಚಾ.ವಿ.ಸ.ನಿ.ನಿ., ಮೈಸೂರು.

**ಪ್ರತಿಗಳು:**

- ಮುಖ್ಯ ಆರ್ಥಿಕ ಅಧಿಕಾರಿ, ಚಾವಿಸನಿನಿ, ಮೈಸೂರುರವರ ಅವಗಾಹನೆಗಾಗಿ.
- ಮುಖ್ಯ ಪ್ರಧಾನ ವ್ಯವಸ್ಥಾಪಕರು(ಆಂ.ಪ), ನಿಗಮ ಕಛೇರಿ, ಮೈಸೂರು.
- ಮುಖ್ಯ ಇಂಜಿನಿಯರ್(ವಿ), ಕಾರ್ಯ ಮತ್ತು ಪಾಲನಾ ವಲಯ, ಚಾವಿಸನಿನಿ, ಹಾಸನ/ಮೈಸೂರು.
- ಎಲ್ಲಾ ಅಧೀಕ್ಷಕ ಇಂಜಿನಿಯರ್(ವಿ), ಕಾರ್ಯ ಮತ್ತು ಪಾಲನಾ ವೃತ್ತ, ಚಾವಿಸನಿನಿ.
- ಕಂಪನಿ ಕಾರ್ಯದರ್ಶಿ, ನಿಗಮ ಕಛೇರಿ, ಚಾವಿಸನಿನಿ., ಮೈಸೂರುರವರ ಮಾಹಿತಿಗಾಗಿ.
- ಎಲ್ಲಾ ಕಾರ್ಯನಿರ್ವಾಹಕ ಇಂಜಿನಿಯರ್(ವಿ)/ಲೆಕ್ಕಾಧಿಕಾರಿ/ಲೆಕ್ಕಾಧಿಕಾರಿ(ಆಂ.ಪ), ಕಾರ್ಯ ಮತ್ತು ಪಾಲನಾ ವಿಭಾಗ, ಚಾವಿಸನಿನಿ ರವರ ಮಾಹಿತಿಗಾಗಿ ಹಾಗೂ ಅಗತ್ಯ ಕ್ರಮಕ್ಕಾಗಿ.
- ಉಪ ಪ್ರಧಾನ ವ್ಯವಸ್ಥಾಪಕರು(ಎಂ.ಐ.ಎಸ್), ನಿಗಮ ಕಛೇರಿ, ಮೈಸೂರುರವರಿಗೆ ನಿಗಮದ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
- ಸಹಾಯಕ ಪ್ರಧಾನ ವ್ಯವಸ್ಥಾಪಕರು(ಆಂ.ನಿ), ನಿಗಮ ಕಛೇರಿ, ಮೈಸೂರು ರವರ ಮಾಹಿತಿಗಾಗಿ ಹಾಗೂ ಅಗತ್ಯ ಕ್ರಮಕ್ಕಾಗಿ.
- ಮಾನ್ಯ ವ್ಯವಸ್ಥಾಪಕ ನಿರ್ದೇಶಕರು/ನಿರ್ದೇಶಕರು(ತಾಂ)/ಮುಖ್ಯ ಆರ್ಥಿಕ ಸಲಹೆಗಾರರು ಇವರ ಆಪ್ತ ಕಾರ್ಯದರ್ಶಿಗಳಿಗೆ ಕಳುಹಿಸುತ್ತಾ ಪ್ರತಿಯನ್ನು ಮಾನ್ಯ ವ್ಯವಸ್ಥಾಪಕ ನಿರ್ದೇಶಕರು/ನಿರ್ದೇಶಕರು(ತಾಂ)/ ಮುಖ್ಯ ಆರ್ಥಿಕ ಸಲಹೆಗಾರರುರವರ ಗಮನಕ್ಕೆ ತರುವಂತೆ ಕೋರಿದೆ.
- ಸ-2(ಆ ಮತ್ತು ಮಾ.ಸಂ)/ಪ್ರ.ಕ.